ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಕಾರ್ಮಿಕ ಕಲ್ಯಾಣ ನಿಧಿ

ಶ್ರೀ ಕೆ. ಎ. ತಿಪ್ಪೇಸ್ವಾಮಿ(ನಾಮನಿರ್ದೇಶನ ಹೊಂದಿದವರು) –

77 (73) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಾರ್ಮಿಕ ಕಲ್ಯಾಣ ನಿಧಿಗೆ ನೋಂದಾಯಿಸುವಲ್ಲಿ ಕಟ್ಟಡ ಕಾರ್ಮಿಕರೆಂದು ವರ್ಗೀಕರಣದಲ್ಲಿ ಮೇಸನರಿ, ಬಡಗಿ, ಪ್ಲಂಬರ್ ಇತರರನ್ನು ಕೈಬಿಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಇವರನ್ನು ನೋಂದಣಿ ಮಾಡಲು ತೆಗೆದುಕೊಂಡಿರುವ ಕ್ರಮಗಳೇನು;

(ಆ) ಕಳೆದ ಮೂರು ವರ್ಷಗಳಿಂದ ತುಮಕೂರು ಜಿಲ್ಲೆಯಲ್ಲಿ ಕಾರ್ಮಿಕ ಕಲ್ಯಾಣ ನಿಧಿಗೆ ಸ್ಥಳೀಯ ಗ್ರಾಮ ಪಂಚಾಯಿತಿ, ಪಟ್ಟಣ ಪಂಚಾಯಿತಿ, ಪುರಸಭೆ ಹಾಗೂ ನಗರಸಭೆಗಳಿಂದ ಜಮೆಯಾದ ಹಣವೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಈ ಜಿಲ್ಲೆಯಲ್ಲಿ ಕಾರ್ಮಿಕ ಆರೋಗ್ಯ ವೆಚ್ಚ ಭರಿಸಲು ಸ್ವೀಕರಿಸಲಾದ ಅರ್ಜಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಈ) ಮಂಜೂರಾಗದೇ ಬಾಕಿ ಉಳಿದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಅದಕ್ಕೆ ಕಾರಣಗಳೇನು?